MARCH 20, 2025

AKASHAVANI - DHARWAD

PRADESH SAAMACHARA (KANNADA) 7.05 A.M

ಮುಖ್ಯಾಂಶಗಳು

- ಬೇಸಿಗೆಯಲ್ಲಿ ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಮೇವಿನ ಕೊರತೆಯಾಗದಂತೆ ಕ್ರಮವಹಿಸಲು ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚನೆ.
- ರಾಜ್ಯದಲ್ಲಿರುವ ಘಾಟ್ ರಸ್ತೆಗಳ ಕಾಮಗಾರಿ ಶೀಘ್ರದಲ್ಲೇ ಪೂರ್ಣ – ಸಚಿವ ಸತೀಶ್ ಜಾರಕಿಹೊಳಿ.
- ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದ ನಿಯಮ ಉಲ್ಲಂಘಿಸಿದವರ ವಿರುದ್ಧ ಸೂಕ್ತ ಕ್ರಮ –ಸಚಿವ ಜಮೀರ್ ಅಹಮ್ಮದ್ ಖಾನ್
- ಮುಜರಾಯಿ ದೇವಸ್ಥಾನದ ಜಮೀನು ಖಾಸಗಿಯವರು ಮಾರಾಟ ಮಾಡಲು ಅವಕಾಶವಿಲ್ಲ – ಸಚಿವ ರಾಮಲಿಂಗಾರೆಡ್ಡಿ.

ಈಗ ವಾರ್ತೆಗಳ ವಿವರ

ಬೇಸಿಗೆಯಲ್ಲಿ ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಮೇವಿನ ಕೊರತೆಯಾಗದಂತೆ ರಾಜ್ಯ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಲಿದೆ. ಈ ಸಂಬಂಧ ಸಮಸ್ಯೆ ಎದುರಾಗದಂತೆ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಕಂದಾಯ ಖಾತೆ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ವಿಧಾನಪರಿಷತ್ತಿನ ಪ್ರಶ್ನೋತ್ತರ ಕಲಾಪ ಆರಂಭವಾಗುತ್ತಿದ್ದಂತೆ, ಸದಸ್ಯ ಚಿದಾನಂದಗೌಡ ಪ್ರಶ್ನೆಗೆ, ಪಶು ಸಂಗೋಪನೆ ಸಚಿವರ ಪರವಾಗಿ ಉತ್ತರಿಸಿದ ಸಚಿವರು, ತುಮಕೂರು ಜಿಲ್ಲೆಯ ಶಿರಾ ತಾಲೂಕು, ವಿಜಯಪುರ ಹಾಗೂ ಇತರೆ ಜಿಲ್ಲೆಗಳಲ್ಲಿ ಅತಿ ಹೆಚ್ಚು ಕುರಿ ಮತ್ತು ಮೇಕೆ ಸಾಕಣೆದಾರರಿದ್ದಾರೆ. ಅವರ ಅನುಕೂಲಕ್ಕಾಗಿ ಮೇವಿನ ಜಾಗ ಹಾಗೂ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಕುರಿ, ಮೇಕೆ ಹೆಚ್ಚು ಸಾಕುವ ಸ್ಥಳದಲ್ಲಿ ಅತ್ಯಾಧುನಿಕ ವಧಾಗಾರ ನಿರ್ಮಿಸಲು ಈಗಾಗಲೇ ಕಾಮಗಾರಿ ಆರಂಭವಾಗಿದ್ದು, ಶೀಘ್ರದಲ್ಲೇ ಕಾರ್ಯಾರಂಭ ಮಾಡಲಿದೆ. ಇದರಿಂದ 20 ವರ್ಷಗಳ ಬೇಡಿಕೆ ಈಡೇರಿದಂತಾಗಲಿದೆ. ಈ ವಧಾಗಾರದಿಂದ ಪ್ಯಾಕಿಂಗ್ ಸುಲಭವಾಗುತ್ತದೆ. ಮಾರುಕಟ್ಟೆ ವಿಸ್ತರಣೆಗೆ ಸಹಾಯವಾಗಲಿದ್ದು, ಜೊತೆಗೆ ರೈತರಿಗೆ ಅನುಕುಲವಾಗಲಿದೆ ಎಂದರು. ಸದಸ್ಯ ಜವರಾಯಿಗೌಡರ ಪ್ರಶ್ನೆಗೆ ಉತ್ತರಿಸಿದ ಸಚಿವ ಕೃಷ್ಣ ಬೈರೇಗೌಡ, ಕುರಿ ಮೇಕೆ ಸಾಕಾಣಿಕೆ ಮಾಡುವ ರೈತರಿಗೆ ಪ್ರೋತ್ಸಾಹ ನೀಡಲು ಮುಂದಿನ ದಿನಗಳಲ್ಲಿ ಸಾಲ ನೀಡುವ ವ್ಯವಸ್ಥೆಯನ್ನು ಚುರುಕುಗೊಳಿಸಲಾಗುವುದು. ಕುರಿಗಾಯಿಗಳ ಮೇಲೆ ಹಲ್ಲೆಯಂತಹ ದುಷ್ಕೃತ್ಯಗಳ ತಡೆಗೆ ಕಾನೂನು ರಚಿಸುವ ಚಿಂತನೆ ಸರ್ಕಾರದ ಮುಂದಿದೆ. ಮುಂದಿನ ದಿನಗಳಲ್ಲಿ ಅದನ್ನು ಜಾರಿಗೆ ತರಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದರು. ಸದಸ್ಯ ಯತೀಂದ್ರ ಸಿದ್ದರಾಮಯ್ಯ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಬಗರಹುಕುಂ ಅರ್ಜಿ ಹಾಕಿ ಖಾತೆ ಮಾಡಲು ವಿಳಂಬವಾಗುತ್ತಿದ್ದು, ಕೆಲವೆಡೆ ಸಣ್ಣಪುಟ್ಟ ತೊಂದರೆಗಳಾಗಿವೆ, ಹಾಗಾಗಿ ನೈಜತೆಯುಳ್ಳ ಜಮೀನುಗಳಿಗೆ ಖಾತೆ ಮಾಡಿಕೊಡಲು ಕ್ರಮ ವಹಿಸಲಾಗುವುದು ಎಂದು ಹೇಳಿದರು.

<><><>

ರಾಜ್ಯದಲ್ಲಿರುವ ಘಾಟ್ ರಸ್ತೆಗಳ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಪ್ರಯತ್ನಿಸಲಾಗುವುದು ಎಂದು ಲೋಕೋಪಯೋಗಿ ಖಾತೆ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ. ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಪರಿಷತ್ ಸದಸ್ಯ ಕಿಶೋರ್ ಕುಮಾರ್ ಪುತ್ತೂರು ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಜ್ಯದಲ್ಲಿರುವ ಒಟ್ಟು 273.64 ಉದ್ದದ 14 ಘಾಟ್ ರಸ್ತೆಗಳಿದ್ದು, ಇವುಗಳಲ್ಲಿ ಪ್ರತಿನಿತ್ಯ ವಾಹನಗಳು ಸಂಚರಿಸುತ್ತವೆ.

ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವ್ಯಾಪ್ತಿಗೆ ಹಾಸನದಿಂದ ಮಾರನಹಳ್ಳಿ ರಸ್ತೆಯಲ್ಲಿ ಬರುವ ಶಿರಾಡಿ ಘಾಟ್‌ನ 10 ಕಿಲೋ ಮೀಟರ್ ಉದ್ದ ಒಳಪಡಲಿದ್ದು, ಈ ಭಾಗದಲ್ಲಿ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. ಈ ರಸ್ತೆ ಭಾಗದಲ್ಲಿ ಉಂಟಾಗುತ್ತಿರುವ ಗುಂಡಿಗಳನ್ನು ಮುಚ್ಚುವ ಕಾರ್ಯವನ್ನು ನಿರಂತರವಾಗಿ ಕೈಗೊಳ್ಳಲಾಗುತ್ತಿದೆ ಎಂದರು.

<><><>

ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದ ನಿಯಮಗಳನ್ನು ಉಲ್ಲಂಘಿಸಿದವರ ವಿರುದ್ದ ದಂಡ ವಸೂಲಾತಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವ ಜಮೀರ್ ಅಹಮ್ಮದ್ ಖಾನ್ ತಿಳಿಸಿದ್ದಾರೆ. ವಿಧಾನ ಪರಿ ´ತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಪರಿ ´ತ್ ಸದಸ್ಯ ಎಸ್.ಎಲ್. ಭೋಜೇಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪ್ರಾಧಿಕಾರವು ನಿಯಮಗಳನ್ನು ಉಲ್ಲಂಘಿಸಿದವರ ವಿರುದ್ಧ ಇದುವರೆಗೆ ಒಟ್ಟು 11 ಸಾವಿರದ 495 ದೂರು ದಾಖಲಿಸಿಕೊಂಡಿದೆ ಎಂದು ತಿಳಿಸಿದರು.

<><><>

ರಾಜ್ಯದ ಮುಜರಾಯಿ ಇಲಾಖೆ ವ್ಯಾಪ್ತಿಯಲ್ಲಿ 34 ಸಾವಿರ ದೇವಾಲಯಗಳಿದ್ದು, ಈ ದೇವಾಲಯಗಳಿಗೆ ಸಂಬಂಧಿಸಿದ ಜಮೀನನ್ನು ಆಯಾ ದೇವಾಲಯಗಳ ಹೆಸರಿನಲ್ಲಿ ಪಹಣಿ ಮಾಡಲು ಕ್ರಮ ಕೈಗೊಳ್ಳುವ ಕಾರ್ಯ ಪ್ರಗತಿಯಲ್ಲಿದೆ ಎಂದು ಮುಜರಾಯಿ ಹಾಗೂ ಸಾರಿಗೆ ಖಾತೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ವಿಧಾನಪರಿ ´ತ್ತಿನಲ್ಲಿ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಸಿ.ಟಿ.ರವಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಈಗಾಗಲೇ 15 ಸಾವಿರ ಎಕರೆ ಜಮೀನನ್ನು ದೇವಾಲಯಗಳ ಹೆಸರಿಗೆ ಪಹಣಿ ಮೂಲಕ ದಾಖಲಿಸಲಾಗಿದೆ. ಎಲ್ಲ ದೇವಾಲಯಗಳ ಆಸ್ತಿಯನ್ನು ಇದೇ ರೀತಿ ಸಂರಕ್ಷಿಸುವ ಕಾರ್ಯ ಶೀಘ್ರದಲ್ಲೇ ಪೂರ್ಣಗೊಳ್ಳಲಿದೆ ಎಂದರು. ಚಿಕ್ಕಮಗಳೂರಿನ ಜಾಗರ ಹೋಬಳಿ ಇನಾಂ ದತ್ತಾತ್ರೇಯ ಪೀಠದ ಆಸ್ತಿ ಒತ್ತುವರಿ ಸಂಬಂಧ ಇಲಾಖೆಯ ಪ್ರಧಾನ ಕಾರ್ಯದರ್ಶಿಯಿಂದ ತನಿಖೆ ನಡೆಸಲಾಗುವುದು ಎಂದು ಭರವಸೆ ನೀಡಿದರು. ಮುಜರಾಯಿ ದೇವಸ್ಥಾನದ ಜಮೀನನ್ನು ಖಾಸಗಿಯವರು ಮಾರಾಟ ಮಾಡಲು ಅವಕಾಶ ಇರುವುದಿಲ್ಲ ಎಂದು ಸಚಿವ ರಾಮಲಿಂಗಾರೆಡ್ಡಿ, ಪರಿ ´ತ್ ಸದಸ್ಯ ಟಿ.ಎನ್. ಜವರಾಯಿಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ X ಖಾತೆ @airnews_dharwad ಹಾಗೂ

ನಮ್ಮ ಫೇಸ್ಬುಕ್ ಖಾತೆ Airrnu Dharwad ಅನುಸರಿಸಿ.

<><><>

ರಾಜ್ಯದಲ್ಲಿ ಅನಧಿಕೃತ ನೋಂದಣಿಯಾಗದಿರುವ ವಾಹನಗಳ ಸಂಚಾರವನ್ನು ಗಂಭೀರವಾಗಿ ಪರಿಗಣಿಸಿ, ನಿಯಂತ್ರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಸಾರಿಗೆ ಮತ್ತು ಮುಜರಾಯಿ ಖಾತೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ವಿಧಾನ ಪರಿ ´ತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಪರಿ ´ತ್ ಸದಸ್ಯ ಗೋವಿಂದ ರಾಜು ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕರ್ನಾಟಕ ಮೋಟಾರು ವಾಹನಗಳ ನಿಯಮಗಳ ಪ್ರಕಾರ, ಮರು ನೋಂದಣಿಗೆ ವಾಹನವನ್ನು ಸಂಬಂಧಿಸಿದ ನೋಂದಣಿ ಪ್ರಾಧಿಕಾರದ ಮುಂದೆ ಭೌತಿಕವಾಗಿ ಹಾಜರುಪಡಿಸಬೇಕಾಗಿರುತ್ತದೆ. ವಾಹನ ಮರು ನೋಂದಣಿ ಕುರಿತು ಮೋಟಾರು ವಾಹನ ಕಾಯ್ದೆ ಪ್ರಕಾರ, ಒಂದು ರಾಜ್ಯದಲ್ಲಿ ನೋಂದಾಯಿತ ಮೋಟಾರು ವಾಹನವನ್ನು ಹನ್ನೆರಡು ತಿಂಗಳುಗಳಿಗಿಂತ ಹೆಚ್ಚಿನ ಅವಧಿಗೆ ಮತ್ತೊಂದು ರಾಜ್ಯದಲ್ಲಿ ಕಾರ್ಯಾಚರಣೆ ಮಾಡಿದಲ್ಲಿ, ಅಂತಹ ವಾಹನದ ಮಾಲೀಕರು, ಮೂಲ ನೋಂದಣಿ ಪ್ರಾಧಿಕಾರದಿಂದ ಪತ್ರ ಪಡೆದು, ನಿಗದಿಪಡಿಸಿದ ತೆರಿಗೆ ಪಾವತಿಸಿ ಮರು ನೋಂದಣಿ ಸಂಖ್ಯೆ ಪಡೆಯಲು ನೋಂದಣಿ ಪ್ರಾಧಿಕಾರಕ್ಕೆ ಸಲ್ಲಿಸಬೇಕಾಗಿರುತ್ತದೆ ಎಂದು ತಿಳಿಸಿದರು.

<><><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ಈ ವರ್ಷ ಕಾಡ್ಗಿಚ್ಚಿನಿಂದಾಗಿ 780 ಎಕರೆ ಅರಣ್ಯ ಪ್ರದೇಶವು ಬೆಂಕಿಗೆ ಆಹುತಿಯಾಗಿದೆ. ಜನವರಿ ತಿಂಗಳಿನಿಂದ ಇದುವರೆಗೆ ಜಿಲ್ಲೆಯ ಚಾರ್ಮಾಡಿ ಘಾಟ್, ಕುದುರೆಮುಖ ರಾಷ್ಟ್ರೀಯ ಉದ್ಯಾನವನ, ಮುಳ್ಳಯ್ಯನಗಿರಿ, ಸೀತಾಳಯ್ಯನಗಿರಿ ತಪ್ಪಲು, ಬಿದಿರುತಳ ಮೀಸಲು ಅರಣ್ಯ, ಕಳಸ ತಾಲೂಕಿನ ಆನೆಗುಡ್ಡ ಸೇರಿ, ಹಲವೆಡೆ ಕಾಡ್ಗಿಚ್ಚು ಸಂಭವಿಸಿದ್ದು, ಈ ಅರಣ್ಯ ಪ್ರದೇಶಗಳಲ್ಲಿನ ಅಪರೂಪದ ಹಾಗೂ ಔಷಧಿ ಗುಣಗಳ ಸಸ್ಯ ಸಂಕುಲ, ಹಲವು ಜಾತಿಯ ಮರಗಳು, ಪ್ರಾಣಿ–ಪಕ್ಷಿಗಳು ಬೆಂಕಿಗೆ ಆಹುತಿಯಾಗಿವೆ. ಕಾಡ್ಗಿಚ್ಚು ತಡೆ ನಿಟ್ಟಿನಲ್ಲಿ, ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಮೂಡಿಸಲಾಗುತ್ತಿದೆ ಹಾಗೂ ಅರಣ್ಯ ಇಲಾಖೆ ಮೂಲಕ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು, ಚಿಕ್ಕಮಗಳೂರು ಅರಣ್ಯ ಉಪ ಸಂರಕ್ಷಣ ಅಧಿಕಾರಿ ರಮೇಶ್ ಬಾಬು ಅವರು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

ಧ್ವನಿ– ರಮೇಶ್ ಬಾಬು (35 ಸೆಕೆಂದುಗಳು)

<><><>

ಕನಿ ್ಠ ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿಯ ನೋಂದಣಿ ಅವಧಿಯನ್ನು ಮಾರ್ಚ್ 31ರವರೆಗೆ ವಿಸ್ತರಿಸಲಾಗಿದೆ ಎಂದು ಕೃಷಿ ಮಾರುಕಟ್ಟೆ ಖಾತೆ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ. ಇದುವರೆಗೆ ನೋಂದಣಿ ಮಾಡಿಕೊಳ್ಳದ ರೈತರು ತಕ್ಷಣ ಸಮೀಪದ ಪ್ರಾಥಮಿಕ ಪತ್ತಿನ ಸಹಕಾರ ಸಂಘ, ರೈತ ಉತ್ಪಾದಕರ ಕಂಪನಿ, ತಾಲೂಕು ಹುಟ್ಟುವಳಿ ಸಹಕಾರ ಸಂಘಗಳಲ್ಲಿ ನೋಂದಣಿ ಮಾಡಿಕೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

<><><>

75 ವರ್ಷ ಪೂರೈಸಿರುವ ಆಕಾಶವಾಣಿ ಧಾರವಾಡ ಕೇಂದ್ರದ, ಸಾರ್ವಜನಿಕ ಪ್ರಸಾರ ಸೇವೆಯನ್ನು ಸ್ಮರಣೀಯವಾಗಿಸಿದ ಘಟನಾವಳಿಗಳ ಶಬ್ದಚಿತ್ರ, 'ಅಮರವಾಣಿಯ ಅಮೃತಘಳಿಗೆ' ಸ್ಮರಣ ಸಂಚಿಕೆಯ ಪ್ರಧಾನ ಕಾರ್ಯಕ್ರಮ ಇಂದು ಬೆಳಗ್ಗೆ 11 ಗಂಟೆಗೆ, ಆಕಾಶವಾಣಿ ಕೇಂದ್ರದ ಶಾಲ್ಮಲಾ ಸಭಾಂಗಣದಲ್ಲಿ ಆಯೋಜಿತವಾಗಿದೆ. ನ್ಯೂಯಾರ್ಕನ ಜಯಾ ಹಾಗೂ ರವಿಶಂಕರ ಭೋಪಳಾಪುರ ಪ್ರತಿಷ್ಠಾನದ ಸಹಕಾರದಲ್ಲಿ ಮೂಡಿಬಂದ ಸಂಚಿಕೆಯನ್ನು, ಧಾರವಾಡ ಮಾಹಿತಿ ತಂತ್ರಜ್ಞಾನ ಸಂಸ್ಥೆ ಟ್ರಿಪಲ್ ಐಟಿ ಸಾರ್ವಜನಿಕ ಸಂಪರ್ಕಾಧಿಕಾರಿ ಡಾಕ್ಟರ್ ಟಿ.ಗೋಪಿನಾಥ್ ಪ್ರದಾನ ಮಾಡಿ, ಶ್ರಮಿಸಿದ ಸಿಬ್ಬಂದಿಗೆ ಗೌರವ ಅರ್ಪಿಸಲಿದ್ದಾರೆ. ತಾಂತ್ರಿಕ ವಿಭಾಗದ ಉಪ ಮಹಾನಿರ್ದೇಶಕ ಕೆ. ಅರುಣ ಪ್ರಭಾಕರ್, ಕಾರ್ಯಕ್ರಮ ಮುಖ್ಯಸ್ಥ ಶರಣಬಸವ ಚೋಳಿನ. ಕಾರ್ಯಕ್ರಮ ನಿರ್ವಾಹಕಿ ಮಂಜುಳಾ ಪುರಾಣಿಕ ಸೇರಿದಂತೆ ನಿಲಯದ ಅಧಿಕಾರಿಗಳು ಹಾಗೂ ಸಿಬ್ಬಂದಿ ಪಾಲ್ಗೊಳ್ಳಲಿದ್ದಾರೆ.

<><><>

ಈಗ ಸಂಕ್ಷಿಪ್ತ ಸುದ್ದಿಗಳು

ಹಾವೇರಿ ಜಿಲ್ಲೆಗೆ ಬರುವ ವಿದೇಶಿ ಹಾಗೂ ಇತರೆ ಪ್ರವಾಸಿಗರ ಸುರಕ್ಷತೆಗೆ ಆದ್ಯತೆ ನೀಡಲಾಗುತ್ತಿದೆ. ಜಿಲ್ಲೆಯಲ್ಲಿರುವ ಪ್ರತಿಯೊಂದು ರೇಸಾರ್ಟ್ ಹಾಗೂ ಹೋಮ್ ಸ್ಟೇಗಳು ನೋಂದಣಿ ಮಾಡಿಸಬೇಕು. ನೋಂದಣಿ ಮಾಡಿಸದಿದ್ದರೆ, ಅನಧಿಕೃತವೆಂದು ಪರಿಗಣಿಸಿ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾಕ್ಟರ್ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

<><><>

ಪರಿಶಿ ್ಟ ಸಮುದಾಯದ ಮೇಲೆ ಹೆಚ್ಚು ದೌರ್ಜನ್ಯ ನಡೆಯುತ್ತಿರುವ ಗ್ರಾಮಗಳ ಮೇಲೆ ನಿಗಾ ಇಟ್ಟು, ಸೂಕ್ತ ಕ್ರಮ ಕೈಗೊಳ್ಳುವಂತೆ ಯಾದಗಿರಿ ಜಿಲ್ಲಾಧಿಕಾರಿ ಡಾಕ್ಟರ್ ಬಿ.ಸುಶೀಲಾ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><><>

ರಾಜ್ಯ ಸರ್ಕಾರದ ಮಹತ್ವಕಾಂಕ್ಷೆಯ ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯಡಿ ಹೊಸ ಸದಸ್ಯರ ನೊಂದಣಿ ಹಾಗೂ ಈಗಾಗಲೇ ನೊಂದಣಿಯಾದ ಸದಸ್ಯರ ನವೀಕರಣಕ್ಕೆ ಇದೇ ಮಾರ್ಚ್ 31 ರವರೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ದಾವಣಗೆರೆ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕ ಮಧು ಶ್ರೀನಿವಾಸ್ ತಿಳಿಸಿದ್ದಾರೆ.

<><><>

ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ನಾಗಡದಿನ್ನಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಕುಡಿಯುವ ನೀರಿನ ಕೆರೆಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪಾಂಡ್ವೆ ರಾಹುಲ್ ತುಕಾರಾಮ ಭೇಟಿ ನೀಡಿ ನೀರಿನ ಮಟ್ಟ ಪರಿಶೀಲಿಸಿದರು.

<><><>